ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂ: ಡಿಸಿಇ/ಟಿಆರ್‌ಎನ್/1/2022-ಟಿಡಿಜಿ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು. ದಿನಾಂಕ:07.12.2022.

**ಸುತ್ತೋಲೆ**

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡುವ ಬೋಧಕರ ಪರಿಷ್ಕೃತ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಪತ್ರ ಸಂಖ್ಯೆ: ಇಡಿ 295 ಡಿಸಿಇ 2022 (ಇ ಕಡತ) ದಿನಾಂಕ:24-11-2022.
2. ಈ ಕಛೇರಿ ಸಮ ಸಂಖ್ಯೆಯ ದಿನಾಂಕ:05.12.2022 ಮತ್ತು 06.12.2022ರ ಸುತ್ತೋಲೆಗಳು.

** ** **

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ವರ್ಗಾವಣೆಗಳನ್ನು ಕೈಗೊಳ್ಳುವ ಸಲುವಾಗಿ ವರ್ಗಾವಣೆ ನಿಯಮಗಳ ನಿಯಮ 5ರಲ್ಲಿ ತಿಳಿಸಿರುವಂತೆ ನಿಗದಿತ ಸೇವಾವಧಿಯನ್ನು ಪೂರೈಸಿ ಮಂಜೂರಾದ ಬೋಧಕರ ಹುದ್ದೆಗಳ ಶೇಕಡಾ 9 ರ ಮಿತಿಗೊಳಪಟ್ಟು EMIS ತಂತ್ರಾಂಶದಲ್ಲಿ ದಾಖಲಿತ ಮಾಹಿತಿಯನ್ವಯ ಕಡ್ಡಾಯ ವರ್ಗಾವಣೆಗೆ ಅರ್ಹರಾಗುವ ಬೋಧಕರ ಪಟ್ಟಿಯನ್ನು ಉಲ್ಲೇಖಿತ ಸುತ್ತೋಲೆಯನ್ವಯ ಪ್ರಕಟಿಸಲಾಗಿತ್ತು.

ಸದರಿ ಪಟ್ಟಿಯಲ್ಲಿನ ಹಲವಾರು ಬೋಧಕರು ಪ್ರಸ್ತುತ ಕರ್ತವ್ಯನಿರ್ವಹಿಸುತ್ತಿರುವ ಕಾಲೇಜಿನಲ್ಲಿ ವರದಿ ಮಾಡಿಕೊಂಡ ದಿನಾಂಕವನ್ನು ತಪ್ಪಾಗಿ ನಮೂದಿಸಿರುವ ಬಗ್ಗೆ ಈ ಕಛೇರಿಯಲ್ಲಿ ಸ್ವೀಕೃತವಾಗಿದ್ದ ಮನವಿಗಳ ಮೇರೆಗೆ EMIS ತಂತ್ರಾಂಶದಲ್ಲಿ ಅಗತ್ಯ ತಿದ್ದುಪಡಿಗಳನ್ನು ಮಾಡಲು ಅವಕಾಶವನ್ನು ಕಲ್ಪಿಸಲಾಗಿತ್ತು.

ವರ್ಗಾವಣೆ ನಿಯಮಗಳ ನಿಯಮ 5ರಲ್ಲಿ ತಿಳಿಸಿರುವಂತೆ ನಿಗದಿತ ಸೇವಾವಧಿಯನ್ನು ಪೂರೈಸಿ ಮಂಜೂರಾದ ಬೋಧಕರ ಹುದ್ದೆಗಳ ಶೇಕಡಾ 9 ರ ಮಿತಿಗೊಳಪಟ್ಟು EMIS ತಂತ್ರಾಂಶದಲ್ಲಿ ದಾಖಲಿತ ಮಾಹಿತಿಯನ್ವಯ ಸಿದ್ಧಪಡಿಸಲಾದ **ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡಲಿರುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ಪರಿಷ್ಕೃತ ಪಟ್ಟಿಯನ್ನು ಕೆಳಕಂಡಂತೆ ಅನುಬಂಧದಲ್ಲಿ ನೀಡಲಾಗಿದೆ.**

1) **ಅನುಬಂಧ-01: ಉಳಿಕೆ ಮೂಲ ವೃಂದದ ವಲಯ ಮತ್ತು ವರ್ಗವಾರು ಪಟ್ಟಿ.**
2) **ಅನುಬಂಧ-02: ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ ವಲಯ ಮತ್ತು ವರ್ಗವಾರು ಪಟ್ಟಿ**

ಸದರಿ ಪಟ್ಟಿಯಲ್ಲಿ ವ್ಯತ್ಯಾಸಗಳಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ಮನವಿಯನ್ನು ದಿನಾಂಕ:08-12-2022ರ ಒಳಗಾಗಿ dce.transfer2022@gmail.com ವಿಳಾಸಕ್ಕೆ ಇಮೇಲ್ ಮೂಲಕ ಸಲ್ಲಿಸುವಂತೆ ಸೂಚಿಸಿದೆ. ಭೌತಿಕವಾಗಿ ಸಲ್ಲಿಸುವ ಮತ್ತು ಕೊನೆಯ ದಿನಾಂಕದ ನಂತರ ಸಲ್ಲಿಸುವ ಹಾಗೂ ಅಪೂರ್ಣ ಮಾಹಿತಿಯನ್ನು ಪರಿಗಣಿಸಲಾಗುವುದಿಲ್ಲ.

(ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

07/12/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಪ್ರತಿಯನ್ನು:

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ -ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ-ಮಾಹಿತಿಗಾಗಿ.
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ರಕ್ಷಾ ಕಡತ.
5. ಕಛೇರಿ ಪ್ರತಿ.